# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಜಾವಿದ ಇನಾಮದಾರ, ಅಧ್ಯಕ್ಷರು, ಕಾಳಗಿ ಗ್ರಾಮ ಪಂಚಾಯತ್, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

10.ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.

11. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ವಿಜಯಪುರ ಇವರ ಪತ್ರ ಸಂಖ್ಯೆ:ಜಿಪಂಅ/ಗ್ರಾಪಂ/ಸಿಬ್ಬಂದಿ/ಸಿಆರ್-185/2018-19/868, ದಿನಾಂಕ:24-06-2019.

12.ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಬೆ:ಜಿಪಂ:43(ಎ):ಸಿಆರ್-16:2019-20, ದಿನಾಂಕ:04.01.2020.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ, ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ವಿಜಯಪುರ ಜಿಲ್ಲೆ ಇವರು ಶ್ರೀ ಜಾವಿದ ಇನಾಮದಾರ, ಅಧ್ಯಕ್ಷರು, ಕಾಳಗಿ ಗ್ರಾಮ ಪಂಚಾಯತ್, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕೆಳಕಂಡ ಅಂಶಗಳ ಮೇಲೆ ತನಿಖೆಯನ್ನು ನಡೆಸಲು ಕೋರಿರುತ್ತಾರೆ.

- ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಖಾತ್ರಿ ಯೋಜನೆಯಡಿ ಇಂಗುಗುಂಡಿ ಕಾಮಗಾರಿಯನ್ನು ಅನುಷ್ಠಾನಗೊಳಿಸದಿರುವ ಬಗ್ಗೆ.
- ಡಾ: ಅಂಬೇಡ್ಕರ್ ಆವಾಸ್ ಯೋಜನೆಯಡಿ ಸ್ಥಳೀಯರಲ್ಲದ 4 ಜನರನ್ನು ಆಯ್ಕೆ ಮಾಡಿರುವ ಬಗ್ಗೆ.

ಮೇಲೆ ಓದಲಾದ ಕ್ರಮಾಂಕ (3)ರ ಪ್ರಸ್ತಾವನೆಯಲ್ಲಿ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ಬೆಳಗಾವಿ, ಇವರು ಶ್ರೀ ಜಾವಿದ ಇನಾಮದಾರ, ಅಧ್ಯಕ್ಷರು, ಕಾಳಗಿ ಗ್ರಾಮ ಪಂಚಾಯತ್, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧದ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ವಿಚಾರಣೆಯನ್ನು ಜರುಗಿಸಲಾಗಿರುತ್ತದೆ. ವಿಚಾರಣೆ ಸಮಯದಲ್ಲಿ ವಾದಿ ಮತ್ತು ಪ್ರತಿವಾದಿಗಳ ವಾದ ವಿವಾದಗಳನ್ನು ಆಲಿಸಿ

ಅವರುಗಳು ಸಲ್ಲಿಸಿದ ಲಿಖಿತ ಹೇಳಿಕೆಯನ್ನು ಹಾಗೂ ಪ್ರಕರಣಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿ, ಸದರಿ ಪ್ರಕರಣದಲ್ಲಿ ಶ್ರೀ ಜಾವಿದ ಇನಾಮದಾರ, ಅಧ್ಯಕ್ಷರು, ಕಾಳಗಿ ಗ್ರಾಮ ಪಂಚಾಯತ್, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ದ ದಾಖಲಾದ ಪ್ರಕರಣವು ವೈಯಕ್ತಿಕ ದ್ವೇಷದಿಂದ ದಾಖಲಿಸಲಾಗಿದ್ದು, ನಡೆದ ಅವ್ಯವಹಾರವನ್ನು ಸಾಬೀತುಪಡಿಸಲು ಯಾವುದೇ ಬಲವಾದ ಕಾರಣಗಳಿಲ್ಲವಾದ್ದರಿಂದ ಪ್ರಕರಣವನ್ನು ವಜಾಗೊಳಿಸಲಾಗಿದೆ. ಆದ್ದರಿಂದ ಸದರಿ ಸದಸ್ಯರ ಸದಸ್ಯರ ಸದಸ್ಯತ್ವವನ್ನು ಮುಂದುವರೆಸುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀ ಜಾವಿದ ಇನಾಮದಾರ, ಅಧ್ಯಕ್ಷರು, ಕಾಳಗಿ ಗ್ರಾಮ ಪಂಚಾಯತ್, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ದ ಮಾಡಲಾದ ಆರೋಪಗಳು ಸಾಬೀತಾಗಿಲ್ಲದಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ದ ದೂರನ್ನು ತಿರಸ್ಕರಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 71 ಗ್ರಾಪಂಅ 2020 ಬೆಂಗಳೂರು, ದಿನಾಂಕ:24.02.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಜಾವಿದ ಇನಾಮದಾರ, ಅಧ್ಯಕ್ಷರು, ಕಾಳಗಿ ಗ್ರಾಮ ಪಂಚಾಯತ್, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿಯಲ್ಲಿ ನಡೆಸಿರುವ ವಿಚಾರಣೆಯಲ್ಲಿ ಇವರ ಮೇಲೆ ಮಾಡಲಾದ ಆರೋಪಗಳು ಸಾಬೀತಾಗಿಲ್ಲವೆಂದು ನಿರ್ಣಯಿಸಿ ಪ್ರಕರಣವನ್ನು ವಜಾಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 24/02/2020
(ಬಿ. ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ:**

1) ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ.
2) ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ವಿಜಯಪುರ ಜಿಲ್ಲೆ.
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ.

5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಾಳಗಿ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು ವಿಜಯಪುರ ಜಿಲ್ಲೆ.

6) ಶ್ರೀ ಜಾವಿದ ಇನಾಮದಾರ, ಅಧ್ಯಕ್ಷರು, ಕಾಳಗಿ ಗ್ರಾಮ ಪಂಚಾಯತ್, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ಮುಖಾಂತರ)**

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
4) ಗಣಕ ಕೋಶ.